ಮೈಸೂರ ಗೆಜಿಟ್.

ನಂ. 14] ಸರ್ಕಾರದಿಂದ ಘಾಂಯಿಷ್ ಆದ್ದು. [1895.

ಬೆಂಗಳೂರು, ಗುರುವಾರ, ಏಪ್ರೆಲ್ ತಾ। 18, ಸ॥ 1895.

೨ನೇ ಖಾಗ.

ಇಂಪ್ಯೆಗವರ್ಮೆಂಟ್, ರೆಸಿಡೆಂಟರು, ಚೀಫ್ ಜಡ್ಜೀರು ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಇನಾಂ ಇಲಾಖಾ.

ಇಸ್ತಿಹಾರ್‌ನಾಮೆ.

ನಂ. 5. ತಾರೀಖು 9ನೇ ಏಪ್ರೆಲ್ ಸ॥ 1895.

ಇನಾಂದಾರರಿಗೆ ಇದರಿಂದ ತಿಳಿಯಪಡಿಸುವದೇನಂದರೆ,—ಲೇಟ್ ವಸ್ತಾ, ಹಾಲಿ ಚಿಕ್ಕಮಗಳೂರು ತಾಲ್ಲೂಕಿನಲ್ಲಿ ಇರತಕ್ಕ ಚಿಲ್ಲರೆ ಇನಾಂಗಳ ಬಾಬತು (304) ಫೈನಲ್ ಟೈಟಲ್ ಡೀಡಿಯಾನೆ ಕಾಯಂಪಟ್ಟೆಗಳು ಕಡೂರು ಡಿಸ್ಟ್ರಿಕ್ಟ್ ಡೆಪ್ಯುಟಿ ಕಮ್ಮಿಷನರ್ ಸಾಹೆಬರವರ ದ್ವಾರಾ ಬಟವಾಡೆ ಬಗ್ಯೆ ಈ ತಾರೀಖಿನಲ್ಲಿ ಕಳುಹಿಸಲ್ಪಟ್ಟಿವೆ.

2. ಸದರೀ ತಾಲ್ಲೂಕಿನ ಅಮಲ್‌ದಾರರಿಂದ ಪ್ರತ್ಯೇಕ ಪ್ರತ್ಯೇಕ ನೋಟೀಸ್ ಬಂದಮೇಲೆ ಅವುಗಳನ್ನ ತೆಗದುಕೊಳ್ಳುವ ಬಗ್ಯೆ ಸದರೀ ಇನಾಂದಾರ್‌ರು ಐರ್ಜ ಪ್ರಕಾರ ಹಾಜರಾಗತಕ್ಕದ್ದು. ಸದರೀ ತಾಲ್ಲೂಕಿನ ಅಮಲ್‌ದಾರ್‌ರು ಅಂಥಾ ನೋಟೀಸುಗಳನ್ನು ದೇರ್‌ಮಾಡೆ ಕೊಡತಕ್ಕದ್ದೆಂದು ಇದರಿಂದ ನಿಯಮಿಸಲ್ಪಟ್ಟು ಯಿರುತ್ತಾರೆ.

3. ಸದರೀ ಚಿಲ್ಲರೆ ಇನಾಂಗಳ ಬಗ್ಯೆ ಈ ಆಫೀಸಿನಿಂದ ಮೊದಲೀ ಕೊಡಲ್ಪಟ್ಟ ಹಂಗಾಮಿ ಪಟ್ಟೆಗಳು ರದ್ದು ಮಾಡಲ್ಪಟ್ಟು ಇರುತ್ತೆಂದು ಇದರ ದೆಕೆಯಿಂದ ಪ್ರಕಟಿಸಲ್ಪಟ್ಟು ಯಿರುತ್ತ.

ಜೆ. ಪಿ. ಗ್ರಾಂಟ್,
ಸೂಪರ್‌ಟೆಂಡೆಂಟ್ ಇನಾಂ ಸೆಟ್ಲ್‌ಮೆಂಟ್.